ಪುಟ-3

ಕ್ರಾಂತಿಯಕಿಡಿ

ಕಾಯಕಯೋಗಿ

KAYAKAYOGI-MORNING DAILY ಕನ್ನಡ ದಿನಪತ್ರಿಕೆ

ಭಾನುವಾರ 04 ಜುಲೈ 2021

## ಪ್ರಳಯ ಆದ್ರೂ 14 ಜನರನ್ನು ವಾಪಸ್ ಸೇರಿಸಿಕೊಳ್ಳಲ್ಲ; ಪಕ್ಷ ತ್ಯಜಿಸಿದ ಶಾಸಕರ ವಿರುದ್ದ ಸಿದ್ದರಾಮಯ್ಯ ಗುಡುಗು



ಬೆಂಗಳೂರು: 17 ಜನ ಮಾತ್ರವಲ್ಲ ಯಾರು ಬೇಕಾದರೂ ಪಕ್ಷಕ್ಕೆ ಬರಬಹುದು ಎಂಬ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಹೇಳಿಕೆ ಬೆನ್ನಲ್ಲೇ ಅಸಮಾಧಾನ ವ್ಯಕ್ತಪಡಿಸಿರುವ ಸಿಎಲ್ಪಿ ನಾಯಕ ಸಿದ್ದರಾಮಯ್ಯ, ಅರ್ಜಿ ಹಾಕಲಿ ಪರಿಶೀಲಿಸುತ್ತೇವೆ ಎಂದಿದ್ದಾರೆ. ಪಕ್ಷ ಬಿಟ್ಟ 14 ಜನ ಬರಲಿ ಎಂದು ಅವರು ಹೇಳಿಕೆ ನೀಡಿಲ್ಲ ಎಂದು ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಸಿದ್ದರಾಮಯ್ಯ, ನಾನು ಡಿ.ಕೆ. ಶಿವಕುಮಾರ್ ಜೊತೆ ಮಾತನಾಡುತ್ತೇನೆ. ಅವರು ಹೇಳಿದ್ದು ಯಾರು ಬೇಕಾದರೂ ಬರಬಹುದು ಎಂದು 14 ಜನರ ಬಗ್ಗೆ ಹೇಳಿಕೆ ನೀಡಿಲ್ಲ. ಪಕ್ಷಕ್ಕೆ ಮೋಸ ಮಾಡಿ ಹೋದ 14 ಜನರನ್ನು ಮರಳಿ ಪಕ್ಷಕ್ಕೆ ಸೇರಿಸಿಕೊಳ್ಳಲ್ಲ. ಈ ಬಗ್ಗೆ ನಾನು ಈ ಹಿಂದೆ ಸ್ಪಷ್ಟಪಡಿಸಿದ್ದೇನೆ. ಪ್ರಳಯ ಆದರೂ ಪಕ್ಷಕ್ಕೆ ಸೇರಿಸಿಕೊಳ್ಳಲ್ಲ ಎಂದು ಸದನದಲ್ಲಿ ನಡೆದ ಕಲಾಪದ ವೇಳೆ ಕೂಡ ಹೇಳಿದ್ದೇನೆ ಎಂದರು.

ಡಿ.ಕೆ. ಶಿವಕುಮಾರ್ ಅವರು ಹೇಳಿದ್ದು ಆ ಅರ್ಥದಲ್ಲಿ ಅಲ್ಲ. ಪಕ್ಷದ ಸಿದ್ಧಾಂತಗಳನ್ನು ಒಪ್ಪಿ ಪಕ್ಷಕ್ಕೆ ಸೇರಲು ಇಚ್ಛಿಸಿದವರು ಅರ್ಜಿ ಹಾಕಿದರೆ ಪರಿಶೀಲಿಸಿ ನಿರ್ಧಾರ ಮಾಡುತ್ತೇವೆ ಎಂದು ಹೇಳಿದ್ದಾರಷ್ಟೇ ಎಂದು ಹೇಳಿದರು.

# ಕೊರೊನಾ ಸೇನಾನಿಗಳಿಗೆ ಹೂವಿನ ಮಳೆಗರೆದು ಸನ್ಮಾನ



ಬೆಂಗಳೂರು : ಭಾರತೀಯ ಜನತಾ ಪಕ್ಷ(ಬಿಜೆಪಿ)ವು ಇಂದು ಜಯನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ದಿನಸಿ ಕಿಟ್ ವಿತರಣೆ ಮತ್ತು ಕರೊನಾ ಸೇನಾನಿಗಳ ಸನ್ಮಾನ ಕಾರ್ಯಕ್ರಮ ಹಮ್ಮಿಕೊಂಡಿತ್ತು.

ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಕೋವಿಡ್ 19 ಎರಡನೇ ಅಲೆಯಿಂದ ಆರ್ಥಿಕ ಸಂಕಷ್ಟಕ್ಕೆ ಒಳಗಾಗಿರುವ ಹಿಂದುಳಿದ ಕುಟುಂಬಗಳಿಗೆ ದಿನಸಿ ಕಿಟ್‌ಗಳನ್ನು ವಿತರಣೆ ಮಾಡಿದರು.

ಕರೊನಾ ಸೇನಾನಿಗಳಾದ ವೈದ್ಯರು ಮತ್ತು ಪೊಲೀಸ್ ಸಿಬ್ಬಂದಿಗಳನ್ನು ಕೂರಿಸಿ, ತಲೆಯ ಮೇಲೆ ಹೂವಿನ ದಳಗಳನ್ನು ಹಾಕಿ ಸನ್ಮಾನಿಸಲಾಯಿತು. ಈ ವೇಳೆ ಕಂದಾಯ ಸಚಿವ ಆರ್.ಅಶೋಕ್, ಸಂಸದ ತೇಜಸ್ವಿ ಸೂರ್ಯ, ಮಾಜಿ ನಗರಪಾಲಿಕೆ ಸದಸ್ಯ ಸಿ.ಕೆ. ರಾಮಮೂರ್ತಿ ಮತ್ತು ಇತರರು ಭಾಗವಹಿಸಿದ್ದರು.

## ಐತಿಹಾಸಿಕ ಮಂದಗೆರೆ ಸೇತುವೆ ಬಿರುಕು ಕಣ್ಮುಚ್ಚಿ ಕುಳಿತ ಅಧಿಕಾರಿಗಳು...!



ಕೆ.ಆರ್.ಪೇಟೆ: ಸುಮಾರು 58 ವರ್ಷದ ಐತಿಹಾಸಿಕ ಮಂದಗೆರೆ ಸೇತುವೆ ಬಿರುಕು. ಕಂಡು ಕಾಣದಂತೆ ಕಣ್ಮುಚ್ಚಿಕುಳಿತಿರುವ ಸಂಬಂಧಪಟ್ಟ ಅಧಿಕಾರಿಗಳಿಗೆ ಕಾಣುತ್ತಿಲ್ಲವೇ ಪ್ರಮುಖ ಐತಿಹಾಸಿಕ ಹಳೆಯ ಸೇತುವೆ....

ತಾಲೂಕಿನ ಕಿಕ್ಕೇರಿ ಹೋಬಳಿ ವ್ಯಾಪ್ತಿಗೆ ಬರುವ ಅಲೆನಹಳ್ಳಿ, ಗದ್ದೆಹೊಸೂರು, ಹೊನ್ನೇನಹಳ್ಳಿ, ಬೆವನಹಳ್ಳಿ, ಚಿಕ್ಕಮಂದಗೆರೆ ಸೇರಿದಂತೆ 20ಕ್ಕೂ ಹೆಚ್ಚು ಹಳ್ಳಿಗಳಿಗೆ ಹಾಗೂ ಮಂದಗೆರೆ ರೈಲ್ವೆ ನಿಲ್ದಾಣಕ್ಕೆ ಕಿಕ್ಕೇರಿ ಮತ್ತು ಹೊಳೆನರಸೀಪುರ ಮಾರ್ಗಕ್ಕೆ ಪ್ರಮುಖ ಮುಖ್ಯ ರಸ್ತೆ ಹಳೆಯ ಸೇತುವೆಯಾದ ಮಂದಗೆರೆ ಸೇತುವೆ. 1963 ಸಾಲಿನ ಮೈಸೂರು ರಾಜ್ಯ ಇದ್ದ ಸಂದರ್ಭದಲ್ಲಿ ಆಗಿನ ಮುಖ್ಯಮಂತ್ರಿ ವೀರೇಂದ್ರ ಪಟೇಲ್ ರವರು ಈ ಭಾಗದ ರೈತಾಪಿ ವರ್ಗ ಹಾಗೂ ಸಾಮಾನ್ಯ ಜನತೆ ಅನುಕೂಲವಾಗಲಿ ಎಂದು ನಿರ್ಮಿಸಲಾಗಿತ್ತು....

2019ನೇ ಸಾಲಿನಲ್ಲಿ ಪ್ರವಾಹ ರೀತಿಯಲ್ಲಿ ಗೊರೂರು ಜಲಾಶಯದಿಂದ ಹೆಚ್ಚುವರಿ ನೀರು ಬಿಟ್ಟ ಹಿನ್ನಲೆಯಲ್ಲಿ ಐತಿಹಾಸಿಕ ಹಳೆಯ ಸೇತುವೆ ಬಿರುಕುಬಿಟ್ಟಿದೆ ಎಂಬ ಮಾಹಿತಿ ಇದೆ..

2019ರ ಪ್ರವಾಹ ಮಾದರಿಯಲ್ಲಿ ಮತ್ತೊಮ್ಮೆ ಗೊರೂರು ಜಲಾಶಯ ಹೆಚ್ಚುವರಿ ನೀರನ್ನು ಹೊರಬಿಟ್ಟರೆ ಸೇತುವೆ ಧರೆಗೆ ಉರುಳುವುದು ನಿಶ್ಚಿತ ಎಂಬಂತಾಗಿದೆ. ಈಗಾಗಲೇ ಸೇತುವೆ ಮಧ್ಯಭಾಗದಲ್ಲಿ 3– 4 ಕಡೆ ಬಿರುಕುಬಿಟ್ಟ ಅಪಾಯ ಸ್ಥಿತಿಯಲ್ಲಿದ್ದು, ಈ ಭಾಗದ ಜನರಿಗೆ ಪ್ರಮುಖವಾಗಿತ್ತು. ಸೇತುವೆ ಬಿರುಕು ಬಿಟ್ಟ ಸೇತುವೆ ಸಂಬಂಧಪಟ್ಟ ಅಧಿಕಾರಿಗಳು ಗಮನ ಹರಿಸದೇ ಇರುವುದು ವಿಪರ್ಯಾಸದ ಸಂಗತಿಯಾಗಿದೆ.

## ಗೌರಿ ಲಂಕೇಶ್ ಹತ್ಯೆ ಕೇಸ್ : ಪ್ರಭಾವಕ್ಕೊಳಗಾಗದೆ ಜಾಮೀನು ಅರ್ಜಿ ಇತ್ಯರ್ಥಕ್ಕೆ ಹೈಕೋರ್ಟ್‌ಗೆ ಸುಪ್ರೀಂ ಸೂಚನೆ



ನವದೆಹಲಿ: ಪತ್ರಕರ್ತೆ ಗೌರಿಲಂಕೇಶ್ ಹತ್ಯೆ ಕೇಸ್‌ನ ಆರೋಪಿಯ ಜಾಮೀನು ಅರ್ಜಿಯನ್ನು ಯಾವುದೇ ಪ್ರಭಾವಕ್ಕೆ ಒಳಗಾಗದೇ ಇತ್ಯರ್ಥ ಪಡಿಸುವಂತೆ ಸುಪ್ರೀಂ ಕೋರ್ಟ್ ಕರ್ನಾಟಕ ಹೈಕೋರ್ಟ್‌ಗೆ ಸೂಚನೆ ನೀಡಿದೆ.

ಗೌರಿಲಂಕೇಶ್ ಅವರ ಸಹೋದರಿ ಕವಿತಾ ಲಂಕೇಶ್ ಸಲ್ಲಿಸಿದ್ದ ತಕರಾರು ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎ.ಎಂ.ಖನ್‌ವಾಲಿಕರ್, ದಿನೇಶ್ ಮಹೇಶ್ವರಿ, ಅನಿರುದ್ಧಭೋಷ್ ಅವರುಗಳನ್ನೊಳಗೊಂಡ ವಿಭಾಗೀಯ ಪೀಠ ಕರ್ನಾಟಕ ಹೈಕೋರ್ಟ್‌ಗೆ ಸ್ಪಷ್ಟ ಸೂಚನೆ ನೀಡಿದ್ದು, ಆರೋಪಿ ಮೋಹನ್ ನಾಯಕ್ ಮೇಲಿನ ಕೇಸನ್ನು ರದ್ದುಗೊಳಿಸಿರುವ ಆದೇಶ ದಿಂದ ಪ್ರಭಾವಿತರಾಗದೆ ಜಾಮೀನು ಅರ್ಜಿ ಯನ್ನು ಇತ್ಯರ್ಥಪಡಿಸಬೇಕೆಂದು ಸಲಹೆ ನೀಡಿದೆ.

ಸಂಘಟಿತ ಅಪರಾಧಗಳ ನಿಯಂತ್ರಣ ಕಾಯ್ದೆ ಅನುಸಾರ ಮೋಹನ್‌ನಾಯಕ್ ವಿರುದ್ಧ ದಾಖಲಿಸಿದ್ದ ಪ್ರಕರಣವನ್ನು ಕರ್ನಾಟಕ ಹೈಕೋರ್ಟ್ ಏ.22ರಂದು ವಜಾಗೊಳಿಸಿತ್ತು. ಇದನ್ನು ಪ್ರಶ್ನಿಸಿ ಕವಿತಾ ಲಂಕೇಶ್ ಸುಪ್ರೀಂ ಕೋರ್ಟ್ ಮೊರೆ ಹೋಗಿದ್ದರು.

ಇದೇ ವೇಳೆ ಆರೋಪಿ ಮೋಹನ್‌ನಾಯಕ್ ಕೂಡ ಜಾಮೀನು ನೀಡುವಂತೆ ನ್ಯಾಯಾಲಯಕ್ಕೆ ಮನವಿ ಮಾಡಿದ್ದರು. ರಜಾಕಾಲದ ನ್ಯಾಯಪೀಠ ಕವಿತಾ ಲಂಕೇಶ್ ಅವರ ಅರ್ಜಿ ಆಧರಿಸಿ ರಾಜ್ಯ ಸರ್ಕಾರ ಹಾಗೂ ಇತರರಿಗೆ ನೋಟಿಸ್ ಜಾರಿ ಮಾಡಿ ಅಭಿಪ್ರಾಯ ತಿಳಿಸುವಂತೆ ಸೂಚಿಸಿದೆ.

ಅರ್ಜಿದಾರರು ಎಸ್‌ಎಲ್‌ಪಿ ದಾಖಲಿಸಲು ಮತ್ತು ಮಧ್ಯಂತರ ಆದೇಶ ನೀಡಲು ಮನವಿ ಮಾಡಿದ್ದಾರೆ. ಇದರ ಬಗ್ಗೆ ಕರ್ನಾಟಕ ಸರ್ಕಾರ ತನ್ನ ಅಭಿಪ್ರಾಯ ತಿಳಿಸಬೇಕೆಂದು ನೋಟಿಸ್‌ನಲ್ಲಿ ಸೂಚಿಸಲಾಗಿದೆ. ಆರೋಪಿ ಮೋಹನ್ ನಾಯಕ್ ಪರ ವಾದವನ್ನು ಆಲಿಸಿದ ನ್ಯಾಯಾಲಯ ನಾವು ಹೈಕೋರ್ಟ್‌ನ ವಿಚಾರಣೆಯನ್ನು ಗಮನಿಸುತ್ತಿದ್ದೇವೆ.

ಈ ಮೊದಲು ಸಂಘಟಿತ ಅಪರಾಧಗಳ ತಡೆ ಕಾಯ್ದೆಯಡಿ ದಾಖಲಾಗಿದ್ದ ಪ್ರಕರಣ ವನ್ನು ವಜಾಗೊಳಿಸಿರುವ ಆದೇಶದ ಪ್ರಭಾವಕ್ಕೆ ಒಳಗಾಗದೆ ಹೈಕೋರ್ಟ್ ಜಾಮೀನು ಅರ್ಜಿ ಇತ್ಯರ್ಥಗೊಳಿಸಬೇಕೆಂದು ಸೂಚಿಸಿದ್ದು, ಮುಂದಿನ ವಿಚಾರಣೆಯನ್ನು ಜು.15ಕ್ಕೆ ಮುಂದೂಡಿದೆ.

2017ರ ಸೆಪ್ಟೆಂಬರ್ 5ರಂದು ಗೌರಿಲಂಕೇಶ್ ಅವರನ್ನು ರಾಜರಾಜೇಶ್ವರಿನಗರದ ಅವರ ಮನೆಯ ಮುಂದೆ ಗುಂಡಿಟ್ಟು ಹತ್ಯೆ ಮಾಡಲಾಗಿತ್ತು. ಪ್ರಕರಣದ ತನಿಖೆ ನಡೆಸಿದ ವಿಶೇಷ ತನಿಖಾ ದಳ ಮೋಹನ್ ನಾಯಕ್ ಹತ್ಯೆ ಮಾಡಿದ ಗುಂಪಿನ ಸದಸ್ಯರಾಗಿದ್ದರು ಎಂದು ಆರೋಪಿಸಿತ್ತು.

ಕೊಲೆ ಪ್ರಕರಣದ ವಿಚಾರಣೆ ಮುಂದುವರೆದಿದ್ದು, ಮೋಹನ್‌ನಾಯಕ್ ವಿರುದ್ಧ ಸಂಘಟಿತ ಅಪರಾಧಗಳ ನಿಯಂತ್ರಣ ಕಾಯ್ದೆಯಡಿ ದಾಖಲಿಸಿದ್ದ ಗಂಭೀರ ಆರೋಪವನ್ನು ಹೈಕೋರ್ಟ್ ವಜಾಗೊಳಿಸಿದೆ.

## ಕಾಣೆಯಾದವರ ಪತ್ತೆಗಾಗಿ

ಮಂಡ್ಯ : ಜಿಲ್ಲೆಯ ಶಂಕರ ನಗರದ ನಿವಾಸಿಯಾದ ಕೆ.ಪಿ ಪುಟ್ಟಸ್ವಾಮಿ(76) ಎಂಬುವವರು ಕಳೆದ ಜೂ.18 ರ ಸಂಜೆ 4:30 ರ ಸಮಯದಲ್ಲಿ ಕಾಣೆಯಾಗಿದ್ದಾರೆ ಎಂದು ಜಿಲ್ಲೆಯ ಪಶ್ಚಿಮ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ಕಾಣೆಯಾದ ವ್ಯಕ್ತಿಯು 4.5 ಎತ್ತರ, ಕೋಲುಮುಖ ಎಣ್ಣೆಗೆಂಪು ಮೈಬಣ್ಣ ಹೊಂದಿದ್ದು, ತಲೆಯಲ್ಲಿ ಕಪ್ಪು ಬಿಳಿ ಮಿಶ್ರಿತ ಕೂದಲು ಹೊಂದಿರುತ್ತಾರೆ. ಹಾಗೂ ಮೈಮೇಲೆ ಅಲ್ಲಲ್ಲಿ ತೊಣ್ಣು(ಬಿಳಿಚು) ಬಂದಿರುತ್ತದೆ ಮತ್ತು ಕತ್ತಿನಲ್ಲಿ ಕಪ್ಪುದಾರ ಯಂತ್ರ ಧರಿಸಿರುತ್ತಾರೆ. ಇವರು ಕನ್ನಡ ಹಾಗೂ ಇಂಗ್ಲಿಷ್ ಭಾಷೆ ಮಾತನಾಡುತ್ತಾರೆ. ಕಾಣೆಯಾದ ದಿನದಂದು ಮೈಮೇಲೆ ಒಂದು ಅರ್ಧತೋಳಿನ ಬಿಳಿಬಣ್ಣದ ಬನಿಯನ್ ಮೇಲೆ ಚಾಕಲೇಟ್ ಬಿಳಿ ಮಿಶ್ರಿತ ಸ್ವೆಟರ್ ಮತ್ತು ಕಾವಿ ಬಣ್ಣದ ಪಂಚೆ ಧರಿಸಿರುತ್ತಾರೆ.

ಇವರ ಸುಳಿವು ಸಿಕ್ಕಲ್ಲಿ ಎಸ್.ಪಿ: 08232-224500, ಮಂಡ್ಯ ಪಶ್ಚಿಮ ಪೊಲೀಸ್ ಠಾಣೆ:08232-22466, ಪೊಲೀಸ್ ಕಂಟ್ರೋಲ್ ರೂಮ್ ಮಂಡ್ಯ:08232-224888 ಗೆ ಸಂಪರ್ಕಿಸಿ.

## ಜುಲೈನಲ್ಲಿ ಭಾರತದಾದ್ಯಂತ ಸಾಮಾನ್ಯ ಮಳೆ ಸಾಧ್ಯತೆ: ಐಎಂಡಿ

ನವದೆಹಲಿ: ಜುಲೈವರೆಗೆ ಮಾನ್ಸೂನ್ ಗಮನಾರ್ಹವಾಗಿ ಚೇತರಿಸಿಕೊಳ್ಳುವ ಸಾಧ್ಯತೆ ಇಲ್ಲ ಮತ್ತು ಪರಿಮಾಣಾತ್ಮಕವಾಗಿ ಇದು ದೀರ್ಘಾವಧಿಯ ಸರಾಸರಿಯ (ಎಲ್ ಪಿಎ) ಶೇಕಡಾ 94 ರಿಂದ 106 ರಷ್ಟಿರುತ್ತದೆ ಎಂದು ಭಾರತ ಹವಾಮಾನ ಇಲಾಖೆ (ಐಎಂಡಿ) ಭವಿಷ್ಯ ನುಡಿದಿದೆ. ಜುಲೈ ತಿಂಗಳ ಮುನ್ಸೂಚನೆಯಲ್ಲಿ ಐಎಂಡಿ ಮಹಾ ನಿರ್ದೇಶಕ ಮೃತುಂಜಯ್ ಮೊಹಾಪಾತ್ರ ಅವರು, ಮೊದಲ ವಾರದಲ್ಲಿ ಮಳೆ ಉತ್ತಮವಾಗುವ ನಿರೀಕ್ಷೆಯಿಲ್ಲ, ಆದರೆ ಜುಲೈ ಎರಡನೇ ವಾರದ ದ್ವಿತೀಯಾರ್ಧದಲ್ಲಿ ಮಳೆಯಾಗುವ ಸಾಧ್ಯತೆಯಿದೆ ಎಂದು ಹೇಳಿದ್ದಾರೆ.



ಒಟ್ಟಾರೆಯಾಗಿ ದೇಶಾದ್ಯಂತ ಜುಲೈ 2021 ರ ಮಾಸಿಕ ಮಳೆ ಸಾಮಾನ್ಯವಾಗಿರಬಹುದು (ದೀರ್ಘಾವಧಿಯ ಸರಾಸರಿಯ ಶೇಕಡಾ 94 ರಿಂದ 106) ಎಂದು ಐಎಂಡಿ ಹೇಳಿದೆ. ಜುಲೈ ಅಂತ್ಯ ಅಥವಾ ಆಗಸ್ಟ್ ಆರಂಭದಲ್ಲಿ ಋತುವಿನ ದ್ವಿತೀಯಾರ್ಧದಲ್ಲಿ ಮಳೆಯ ಮುನ್ಸೂಚನೆಯನ್ನು ಐಎಂಡಿ ಹೊರಡಿಸಲಿದೆ. ಈ ತಿಂಗಳು, ದಕ್ಷಿಣ ಕೇರಳ, ಪಶ್ಚಿಮ ಮತ್ತು ಉತ್ತರ ಆಂಧ್ರಪ್ರದೇಶ, ಮಹಾರಾಷ್ಟ್ರದ ಕೊಂಕಣ ಮತ್ತು ವಿದರ್ಭ, ಉತ್ತರ ಗುಜರಾತ್, ಉತ್ತರ ರಾಜಸ್ಥಾನ, ದೆಹಲಿ, ಹರಿಯಾಣ, ಪಂಜಾಬ್, ಉತ್ತರ ಉತ್ತರ ಪ್ರದೇಶ, ಉತ್ತರ ಒಡಿಶಾ, ಪಶ್ಚಿಮ ಬಂಗಾಳ, ದಕ್ಷಿಣ ಸಿಕ್ಕಿಂ ಮತ್ತು ಅರುಣಾಚಲ ಪ್ರದೇಶಗಳಲ್ಲಿ ಸಾಮಾನ್ಯ ಕ್ಕಿಂತ ಕಡಿಮೆ ಮಳೆಯಾಗುವ ಮುನ್ಸೂಚನೆ ಇದೆ ಅಂತ ತಿಳಿಸಿದೆ.

# ಕಟ್ಟಡ ನಿರ್ಮಾಣ, ಪೇಂಟಿಂಗ್ ಸಾಧನ ಸಲಕರಣೆಗಳ ಕಿಟ್ ವಿತರಣೆ

ಕೆ.ಆರ್.ಪೇಟೆ : ಕಾರ್ಮಿಕರು ಈ ರಾಷ್ಟ್ರದ ಅಮೂಲ್ಯ ಸಂಪತ್ತು. ದೇಶದ ಪ್ರಗತಿಯಲ್ಲಿ ಕಾರ್ಮಿಕರ ಪಾತ್ರವು ನಿರ್ಣಾಯಕವಾಗಿದೆ. ಕಾರ್ಮಿಕರು ದುಶ್ಚಟಗಳಿಂದ ದೂರವಿದ್ದು ಕಾರ್ಮಿಕ ಇಲಾಖೆಯಲ್ಲಿ ತಮ್ಮ ಹೆಸರನ್ನು ನೊಂದಾಯಿಸಿ ಗುರುತಿನ ಚೀಟಿ ಪಡೆದುಕೊಂಡು ಸರ್ಕಾರದ ವತಿಯಿಂದ ದೊರೆಯುವ ವಿವಿಧ ಸೌಲಭ್ಯಗಳನ್ನು ಪಡೆದುಕೊಂಡು ಅಭಿವೃದ್ಧಿಯ ಪಥದತ್ತ ಸಾಗಬೇಕು ಎಂದು ಕೆ.ಆರ್.ಪೇಟೆ ಪಟ್ಟಣದ ಜೆ.ಎಂ.ಎಫ್.ಸಿ ನ್ಯಾಯಾಲಯದ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರಾದ ಸಮೀರ್.ಪಿ.ನಂಧ್ಯಾಲ್ ಕರೆ ನೀಡಿದರು.

ಪಟ್ಟಣದ ಎಸ್.ಎಂ.ಲಿಂಗಪ್ಪ ಸಹಕಾರ ಭವನದಲ್ಲಿ ಕಾರ್ಮಿಕ ಇಲಾಖೆಯು ಆಯೋಜಿಸಿದ್ದ ಸರಳ ಸಮಾರಂಭದಲ್ಲಿ ನೊಂದಾಯಿತ ಕಾರ್ಮಿಕರಿಗೆ ಕಟ್ಟಡ ನಿರ್ಮಾಣ ಹಾಗೂ ಪೇಂಟಿಂಗ್ ಸಾಧನ ಸಲಕರಣೆಗಳ ಕಿಟ್‌ಗಳನ್ನು ವಿತರಿಸಿ ಮಾತನಾಡಿದರು.

ಅಸಂಘಟಿತರಾಗಿರುವ ಕಾರ್ಮಿಕ ಬಂಧುಗಳು ಸಂಘಟಿತರಾಗಿ ತಮಗೆ ಸರ್ಕಾರದ ವತಿಯಿಂದ ದೊರೆಯಬಹುದಾದ ಸಂವಿಧಾನ ಬದ್ಧವಾದ ಸವಲತ್ತುಗಳನ್ನು ಪಡೆದುಕೊಂಡು ಅಭಿವೃದ್ಧಿಯ ಪಥದತ್ತ ಸಾಗಬೇಕು ಎಂದು ನ್ಯಾಯಾಧೀಶರಾದ ಸಮೀರ್ ಪಿ.ನಂಧ್ಯಾಲ್ ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಅಪರ ಸಿವಿಲ್ ನ್ಯಾಯಾಧೀಶರಾದ ಬಸವರಾಜಪ್ಪ ತುಳಸಪ್ಪನಾಯಕ್, ಕಿರಿಯ ಶ್ರೇಣಿ ನ್ಯಾಯಾಲಯದ ನ್ಯಾಯಾಧೀಶರಾದ ಪೂಜಾಶೆಟ್ಟಿ, ತಾಲ್ಲೂಕು ವಕೀಲರ ಸಂಘದ ಅಧ್ಯಕ್ಷ ಎಂ.ಆರ್.ಪ್ರಸನ್ನಕುಮಾರ್, ಉಪಾಧ್ಯಕ್ಷ ಕೆ.ಆರ್.ಇಂದ್ರಕುಮಾರ್, ಕಾರ್ಯದರ್ಶಿ ಡಿ.ಆರ್.ಮೋಹನ್, ಖಜಾಂಚಿ ಬಿ.ಕೆ.ಯೋಗೇಶ್, ಸರ್ಕಾರಿ ಅಭಿಯೋಜಕ ಬಿ.ಸಿ.ರಾಜೇಶ್, ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಹೆಚ್.ಎನ್.ಚಂದ್ರಶೇಖರ್, ಪುರಸಭಾ ಮುಖ್ಯಾಧಿಕಾರಿ ಸತೀಶ್ ಕುಮಾರ್, ಕಾರ್ಮಿಕ ನಿರೀಕ್ಷಕರಾದ ಎಂ.ಕೃಷ್ಣ, ಸಹ ಕಾರ್ಮಿಕ ಅಧಿಕಾರಿ ಮಂಜುನಾಥ್, ಕಾರ್ಮಿಕ ಬಂಧು ಶಿವು, ಮಂಜುನಾಥಚಾರಿ, ಸಂತೋಷ್ ಇತರರು ಉಪಸ್ಥಿತರಿದ್ದರು.



ಕೆ.ಆರ್.ಪೇಟೆ ಪಟ್ಟಣದ ಎಸ್.ಎಂ.ಲಿಂಗಪ್ಪ ಸಹಕಾರ ಭವನದಲ್ಲಿ ಕಾರ್ಮಿಕ ಇಲಾಖೆಯು ಆಯೋಜಿಸಿದ್ದ ಸರಳ ಸಮಾರಂಭದಲ್ಲಿ ನೊಂದಾಯಿತ ಕಾರ್ಮಿಕರಿಗೆ ಕಟ್ಟಡ ನಿರ್ಮಾಣ ಹಾಗೂ ಪೇಂಟಿಂಗ್ ಸಾಧನ ಸಲಕರಣೆಗಳ ಕಿಟ್ ಗಳನ್ನು ಪಟ್ಟಣದ ಸಿವಿಲ್ ನ್ಯಾಯಾಲಯದ ಹಿರಿಯ ಶ್ರೇಣಿ ನ್ಯಾಯಾಧೀಶರಾದ ಸಮೀರ್ ಪಿ.ನಂಧ್ಯಾಲ್ ಅವರು ಕಾರ್ಮಿಕರಿಗೆ ವಿತರಿಸಿ ಮಾತನಾಡಿದರು.

## ಮಾನಹಾನಿ ಮಾಡುವ ಸುದ್ದಿ ಪ್ರಕಟಿಸದಂತೆ ತಡೆಯಾಜ್ಞೆ: ಕೇಂದ್ರ ಸಚಿವ ಸದಾನಂದ ಗೌಡ



ಬೆಂಗಳೂರು: ತನ್ನ ಮಾನಹಾನಿ ಮಾಡುವಂತಹ ಯಾವುದೇ ಸುದ್ದಿಯನ್ನು ಪ್ರಕಟಿಸಬಾರದು ಎಂದು ಮಾಧ್ಯಮಗಳ ವಿರುದ್ಧ ಕೇಂದ್ರ ಸಚಿವ ಡಿ.ವಿ.ಸದಾನಂದ ಗೌಡ ಅವರು ನಗರದ ಸಿಟಿ ಸಿವಿಲ್ ನ್ಯಾಯಾಲಯದಲ್ಲಿ ತಡೆಯಾಜ್ಞೆ ತಂದಿದ್ದಾರೆ.

ಚುನಾವಣೆ, ಸಂಪುಟ ರಚನೆ ಸಂದರ್ಭದಲ್ಲಿ ವಿರೋಧಿಗಳು ಈ ಮುಂಚೆಯೂ ನನ್ನ ವೈಯಕ್ತಿಕ ತೇಜೋವಧೆಗೆ ಪ್ರಯತ್ನಸಿದ್ದರು.

ಮಾಧ್ಯಮ ಸ್ವಾತಂತ್ರ್ಯವನ್ನು ನಾನು ಸಂಪೂರ್ಣ ಗೌರವಿಸುತ್ತೇನೆ. ಆದರೆ ವಿರೋಧಿಗಳ ಸಂಚಿಗೆ ಬಲಿಯಾಗಿ ತಪ್ಪುಮಾಹಿತಿ ಪ್ರಸರಣದಲ್ಲಿ ತೊಡಗಬಾರದೆಂಬ ಉದ್ದೇಶದಿಂದ ನಿರ್ಬಂಧ ಆದೇಶ ತರಬೇಕಾಗಿ ಬಂತು. ದಯವಿಟ್ಟು ಯಾರೂ ಅನ್ಯತಾ ಭಾವಿಸಬಾರದು

ಈ ಸಂಬಂಧ ಟ್ವೀಟ್ ಮಾಡಿರುವ ಅವರು, ಚುನಾವಣೆ, ಸಂಪುಟ ರಚನೆ ಸಂದರ್ಭದಲ್ಲಿ ವಿರೋಧಿಗಳು ಈ ಮುಂಚೆಯೂ ನನ್ನ ವಯಕ್ತಿಕ ತೇಜೋವಧೆಗೆ ಪ್ರಯತ್ನಸಿದ್ದರು. ಮಾಧ್ಯಮ ಸ್ವಾತಂತ್ರ್ಯವನ್ನು ನಾನು ಸಂಪೂರ್ಣ ಗೌರವಿಸುತ್ತೇನೆ. ಆದರೆ ವಿರೋಧಿಗಳ ಸಂಚಿಗೆ ಬಲಿಯಾಗಿ ತಪ್ಪು ಮಾಹಿತಿ ಪ್ರಸರಣದಲ್ಲಿ ತೊಡಗಬಾರದೆಂಬ ಉದ್ದೇಶದಿಂದ ನಿರ್ಬಂಧ ಆದೇಶ ತರಬೇಕಾಗಿ ಬಂತು. ದಯವಿಟ್ಟು ಯಾರೂ ಅನ್ಯತಾ ಭಾವಿಸಬಾರದು' ಎಂದು ಹೇಳಿದ್ದು, ಈ ಬೆಳವಣಿಗೆ ಸಾರ್ವಜನಿಕ ವಲಯದಲ್ಲಿ ವ್ಯಾಪಕ ಚರ್ಚೆಗೆ ಗ್ರಾಸವಾಗಿದೆ.

## ಜೆಡಿಎಸ್ ಮುಖಂಡರ ವಿರುದ್ಧ ಕಾಂಗ್ರೆಸ್ ಆಕ್ರೋಶ

ಮಂಡ್ಯ : ಮಾಜಿ ಸಚಿವ ಎನ್.ಚಲುವರಾಯಸ್ವಾಮಿ ಅವರ ವಿರುದ್ಧ ಜೆಡಿಎಸ್ ಮುಖಂಡರ ಆರೋಪ ಆಧಾರವಿಲ್ಲದ್ದು. ಇದು ಮುಂದುವರಿಯಬಾರದು ಎಂದು ಕಾಂಗ್ರೆಸ್ ಮುಖಂಡರು ಎಚ್ಚರಿಸಿದ್ದಾರೆ.

ಜಂಟಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸಿ.ಡಿ. ಗಂಗಾಧರ್, ಕುಮಾರಸ್ವಾಮಿ ಅವರು ಮುಖ್ಯಮಂತ್ರಿ ಆಗಲು ಚಲುವರಾಯಸ್ವಾಮಿ ಅವರೂ ಕಾರಣವೆಂಬುದನ್ನು ಅರಿಯಬೇಕು ಎಂದರು.

ನಾಗಮಂಗಲ ಶಾಸಕ ಸುರೇಶ್‌ಗೌಡ, ಜೆಡಿಎಸ್ ಜಿಲ್ಲಾಧ್ಯಕ್ಷ ಡಿ.ರಮೇಶ್ ವಿರುದ್ಧ ಕಿಡಿಕಾರಿದ ಅವರು, ಹಾಲಿಗೆ ನೀರು ಮಿಶ್ರಣ ಪ್ರಕರಣದಲ್ಲಿ ಕುಮಾರಸ್ವಾಮಿ ಆಡಳಿತ ಮಂಡಳಿ ಪರ ನಿಂತಿರುವುದು ಏಕೆ? ಮೈಶುಗರ್ ಗುತ್ತಿಗೆ ಬಗ್ಗೆ ಏಕೆ ಮಾತನಾಡುತ್ತಿಲ್ಲ ಎಂದು ಪ್ರಶ್ನಿಸಿದರು.

ಮಾಜಿ ಶಾಸಕ ಎಚ್.ಬಿ.ರಾಮು ಮಾತನಾಡಿ, ಜಿಲ್ಲೆಯಲ್ಲಿ ಜೆಡಿಎಸ್ ಬೆಳೆಸಿದ ದಿವಂಗತ ಮಾಜಿ ಸಚಿವ ಎಸ್.ಡಿ.ಜಯರಾಂ ಕುಟುಂಬವನ್ನೇ ಕುಮಾರಸ್ವಾಮಿ ಮರೆತಿದ್ದಾರೆ. ಹಾಗೆಯೇ ಕುಮಾರಸ್ವಾಮಿ ಸಿಎಂ ಆಗಲು ಚಲುವರಾಯಸ್ವಾಮಿ ಅವರೇ ಕಾರಣ ಎಂದರು.

ದೇಶಹಳ್ಳಿ ಮೋಹನ್‌ಕುಮಾರ್, ಅಂಜನಾ, ರುದ್ರಪ್ಪ, ಸಿದ್ದರಾಮೇಗೌಡ, ಕಂಬದಹಳ್ಳಿ ಪುಟ್ಟಸ್ವಾಮಿ, ಇತರ ಮುಖಂಡರು ಉಪಸ್ಥಿತರಿದ್ದರು.

## ರೈತರ ಬೆಳೆ ಸಮೀಕ್ಷೆ ಆಪ್ ಬಿಡುಗಡೆ

ಮಂಡ್ಯ : 2021-22ನೇ ಸಾಲಿನ ಪೂರ್ವ ಮುಂಗಾರು ಹಂಗಾಮಿನಲ್ಲಿ ಬೆಳೆ ಸಮೀಕ್ಷೆ ಕಾರ್ಯಕೈಗೊಳ್ಳಲು ಕೃಷಿ ಇಲಾಖೆಯವತಿಯಿಂದ "ರೈತರ ಬೆಳೆ ಸಮೀಕ್ಷೆ ಆಪ್" ನ್ನು ಬಿಡುಗಡೆ ಮಾಡಲಾಗಿದ್ದು, ಪೂರ್ವ ಮುಂಗಾರು ಹಂಗಾಮಿನ ಬೆಳೆಗಳನ್ನು ಬೆಳೆದಿರುವ ರೈತರು ಆಪ್‌ನ್ನು ಡೌನ್‌ಲೌಡ್ ಮಾಡಿಕೊಂಡು ತಾವು ಬೆಳೆದಿರುವ ಬೆಳೆಯ ಮಾಹಿತಿಯನ್ನು ಆನ್‌ಲೋಡ್ ಮಾಡಬೇಕಾಗಿರುತ್ತದೆ.

ಈ ಆಪ್‌ನಿಂದ ಜಮೀನಿನಲ್ಲಿ ಬೆಳೆದಿರುವ ಬೆಳೆಗಳ ಮಾಹಿತಿ ಯನ್ನು ರೈತರೇ ನಿಖರವಾಗಿ ದಾಖಲಿಸಬಹುದು. ಬೆಳೆ ಸಮೀಕ್ಷೆಯ ಮಾಹಿತಿಯನ್ನು ಬೆಳೆ ವಿಮೆ, ಬೆಳೆ ನಷ್ಟ ಪರಿಹಾರ, ಬೆಂಬಲ ಬೆಲೆ ಮತ್ತು ಸರ್ಕಾರದ ವಿವಿಧ ಯೋಜನೆಗಳಡಿ ವಿವಿಧ ಸವಲತ್ತುಗಳನ್ನು ಒದಗಿಸಲು ಮತ್ತು RTC ಯಲ್ಲಿ ಅಳವಡಿಸಲು ಬಳಸಲಾಗುತ್ತದೆ. ಬೆಳೆಗಳ ವಿವರಗಳನ್ನು ಆನ್‌ಲೋಡ್ ಮಾಡದಿದ್ದಲ್ಲಿ ಸರ್ಕಾರದ ವಿವಿಧ ಯೋಜನೆ ಗಳಿಂದ ದೊರೆಯುವ ಸವಲತ್ತುಗಳನ್ನು ಪಡೆಯುವುದರಿಂದ ವಂಚಿತರಾಗುವ ಸಂಭವವಿರುತ್ತದೆ. ಗೂಗಲ್ ಪ್ಲೆ ಸ್ಟೋರ್‌ನಲ್ಲಿ "Farmer Crop Survey 2021-22" ಎಂದು ಟೈಪ್ ಮಾಡಿ ಪೂರ್ವ ಮುಂಗಾರು ಬೆಳೆ ಸಮೀಕ್ಷೆ 2021-22 ಆಪ್‌ನ್ನು ಡೌನ್‌ಲೋಡ್ ಮಾಡಿ ಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ರೈತರು ತಮ್ಮ ಹತ್ತಿರದ ರೈತ ಸಂಪರ್ಕ ಕೇಂದ್ರವನ್ನು ಅಥವಾ ಆಯಾ ಗ್ರಾಮಗಳಿಗೆ ನಿಯೋಜಿಸ ಲಾಗಿರುವ ಖಾಸಗಿ ನಿವಾಸಿಗಳನ್ನು ಅಥವಾ ಬೆಳೆ ಸಮೀಕ್ಷೆ ಸಹಾಯವಾಣಿ ಸಂಖ್ಯೆ : 8448447715 ಸಂಪರ್ಕಿಸಬಹುದು ಎಂದು ಜಿಲ್ಲಾ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.